# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:28.01.2022 ರಂದು ಮಧ್ಯಾಹ್ನ 3:00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್-19 ಮಹಾಮಾರಿ ಸಾಂಕ್ರಮಿಕ ರೋಗ ಹರಡದಂತೆ ಮುಂಜಾಗ್ರತವಾಗಿ ತೆಗೆದುಕೊಳ್ಳಬಹುದಾದ ಕ್ರಮಗಳು.
2. ವಿಪತ್ತು ನಿರ್ವಹಣಾ ಸಮಿತಿ (Disaster Management Committee) ನಿರ್ವಹಿಸಬೇಕಾದ ಕ್ರಮಗಳ ಕುರಿತು.
3. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.
4. ವಾರ್ಡಿನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು.
5. ಮುಂಗಾರು ಮಳೆಯಿಂದ ಸಂಭವಿಸಿದ/ಸಂಭವಿಸಬಹುದಾದ ಅನಾಹುತಗಳ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು.

**ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು**

| ಕ್ರ.ಸಂ | ಹೆಸರು | ಹುದ್ದೆ | |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | 9845989978 |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | 9620687103 |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | 9449844670 |
| 4 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | 9686566945 |
| 5 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | 9986835425 |
| 6 | ಶ್ರೀ.ಸಂತೋಷ್ ದೀಪು | ಅರಣ್ಯ | 8884324927 |
| 7 | ಶ್ರೀ.ರಮೇಶ್.ಎಲ್. | ಕಿ.ಆ.ಪ. | 9902785690 |

| | | | |
|---|---|---|---|
| 8 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | 9739453414 |
| 9 | ಶ್ರೀ.ರಾಜೇಂದ್ರ ರೆಡ್ಡಿ | ಸದಸ್ಯರು | 9986490283 |
| 10 | ಶ್ರೀ.ಮಂಜುನಾಥ | ಸದಸ್ಯರು | 9845680018 |
| 11 | ಶ್ರೀ.ರಮೇಶ್ | ಸದಸ್ಯರು | 9035515888 |

**ಸಭೆಯ ನಡವಳಿಗಳು**

1. ಪ್ರಪ್ರಥಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರೋಗದ ಬಗ್ಗೆ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಚರ್ಚಿಸಿದರು.

2. ಘನತ್ಯಾಜ್ಯ ಇಲಾಖೆಗೆ ಸಂಬಂಧಪಟ್ಟ ಬ್ಲಾಕ್‌ಸ್ಪಾಟ್‌ಗಳನ್ನು ಸ್ವಚ್ಚಗೊಳಿಸಲು ಮತ್ತು ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

3. ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಗಣರಾಜ್ಯೋತ್ಸವ ದಿನದ ಶುಭಾಶಯಗಳನ್ನು ಕೋರಿದರು

4. ಶಿಥಿಲಾವಸ್ಥೆಯಲ್ಲಿರುವ/ಅಪಾಯಸ್ಥಿತಿಯಲ್ಲಿರುವ ಮರಗಳನ್ನು ಕಠಾವು ಮಾಡಿ, ಅವಕಾಶ ಇರುವ ಜಾಗದಲ್ಲಿ ಸಸಿಗಳನ್ನು ನೆಡಲು ವಾರ್ಡ್ ಸಮಿತಿಯ ಅಧ್ಯಕ್ಷರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ಚರಂಡಿಗಳಲ್ಲಿ ಹೂಳು ತುಂಬಿದ್ದು ಇದರಿಂದ ಚರಂಡಿನೀರು ಸರಾಗವಾಗಿ ಹರಿಯದೇ ರಸ್ತೆಗಳ ಇಕ್ಕೆಲಗಳಲ್ಲಿ ಹರಿದು ಸಾರ್ವಜನಿಕರ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಾರ್ವಜನಿಕರು ಸಭೆಯಲ್ಲಿ ದೂರಿದರು. ಸಭೆಯ ಉಪಸ್ಥಿತರಿದ್ದ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಸದರಿ ದೂರಿನ ಬಗ್ಗೆ ಕ್ರಮವಹಿಸಲು ಸೂಚಿಸಿದರು.

6. ವಾರ್ಡ್ ವ್ಯಾಪ್ತಿಯಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು ಇದರಿಂದ ಸಾರ್ವಜನಿಕರು ಹಾಗೂ ಮಕ್ಕಳಿಗೆ ಓಡಾಡಲು ತೊಂದರೆಯಾಗುತ್ತಿದ್ದು ಈ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಆರೋಗ್ಯ ಪರೀವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

7. ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ಪೈಪ್‌ಲೈನ್, ಹಾಗೂ ಒಳಚರಂಡಿ ಪೈಪ್‌ಲೈನ್ ಅಳವಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿಯಲ್ಲಿ ಕಾಮಗಾರಿ ಆದೇಶ ನೀಡಿದ್ದು, ತುರ್ತಾಗಿ ಕಾಮಗಾರಿ ನಿರ್ವಹಿಸಿ ಪೂರ್ಣಗೊಳಿಸಲು ವಾರ್ಡ್ ಸಮಿತಿ ಅಧ್ಯಕ್ಷರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳಿಗೆ ಸೂಚಿಸಿದರು.

8. ಸದರಿ ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿರು ಕೇಬಲ್‌ಗಳನ್ನು ತೆಗೆಯಲು ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರು ರವರಿಗೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ.
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ ಮಂಡಿಸಿದೆ
4) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.
5) ಕಛೇರಿ ಕಡತಕ್ಕೆ